**ಓ .ಎಸ್ . ನಂ.289/2021** **ಪಿಡಬ್ಲ್ಯೂ: 2**

**ದಿನಾಂಕ 20.06.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ– ಶ್ರೀ ಎಸ್.ಎಸ್.ಬಿ. ರವರ ಪರ ಶ್ರೀ ಎಂ.ಎಸ್.ಹೆಚ್ ಪ್ರತಿವಾದಿ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸುವ ಪೂರ್ವದಲ್ಲಿ ನಾನು ಯಾವುದೇ ದಾಖಲೆಗಳನ್ನು ನೋಡಿರುವುದಿಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಯಾರು ಹೇಳಿ ಬರೆಯಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ದಿಃ10.01.1989ರಂದು ಪ್ರತಿವಾದಿ ವಾದಿಯ ತಂದೆ ಅವರಿಗೆ ಯಾವುದೇ ಕ್ರಯದ ಕರಾರು ಬರೆದುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ–6ನ್ನು ವಾದಿ ಸೃಷ್ಟಿ ಮಾಡಿರುತ್ತಾರೆಂದರೆ ನನಗೆ ಗೊತ್ತಿಲ್ಲ. ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾಸ್ತಿಯ ಬಳಿ ನಮ್ಮ ಜಮೀನು ಇದೆ ಎಂದು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ಈ ದಿನದವರೆವಿಗೂ ಪ್ರತಿವಾದಿ ದಾವಾಸ್ತಿಯ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾದಂ., ಕೊಳ್ಳೇಗಾಲ**